ಪಿ.ಡಬ್ಲ್ಯೂಃ 01.

ದಿನಾಂಕಃ 08-02-2019 ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀಃ ಡಿ ಎಲ್ ವಕೀಲರಿಂದಃ

ನಾನು ಮುಖ್ಯ ವಿಚಾರಣೆಯಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ ಸದರಿ ಪ್ರಮಾಣ ಪತ್ರಿಕೆಯಲ್ಲಿ ಹೇಳಿರುವ ಅಂಶಗಳನ್ನು ನಾನೇ ಹೇಳಿ ಬರೆಯಿಸಿದ್ದೇನೆ ಹಾಗೂ ಅವು ಸತ್ಯವಾಗಿರುತ್ತವೆಂದು ಪ್ರಮಾಣೀಕರಿಸುತ್ತೇನೆ. ಸದರಿ ಪ್ರಮಾಣ ಪತ್ರಿಕೆಯಲ್ಲಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಈಗಾಗಲೇ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, ಅವುಗಳನ್ನು ನಿಶಾನೆ ಗೊಳಿಸಬೇಕೆಂದು ಕೇಳಿ ಕೊಳ್ಳುತ್ತೇನೆ.

1. ಎರಡು ಮೂಲ ಸಾಗುವಳಿ ಚೀಟಿ ಗಳನ್ನು ನಿಪಿ.1 ಮತ್ತು 2 ಎಂದು,
2. ಎರಡು ಡಿಮಾಂಡ್ ರಿಜಿಸ್ಟರ್ ಗಳನ್ನು ನಿಪಿ.3 ಮತ್ತು 4 ಎಂದು,
3. ಸಾಗುವಳಿದಾರರ ಪಟ್ಟಿಯ ದೃಢೀಕೃತ ನಕಲು ಪ್ರತಿ ನಿಪಿ.5 ಎಂದು,
4. ಹತ್ತು ರಶೀದಿಗಳು ನಿಪಿ.6 ರಿಂದ ನಿಪಿ 15 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದಿನ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದರಿಂದ ಕೋರಿಕೆ ಮೇರೆಗೆ ಮುಂದೂಡಲಾಯಿತು.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸರಿ ಇದೆ.

ಸಿವಿಲ್ ಮತ್ತು ಜೆ.ಎಂ.ಎಫ್.ಸಿ.
ನ್ಯಾಯಾಧೀಶರು, ಹುಣಸೂರು.